ಈ) ಇಲ್ಲ.

ಕೋಲಾರ ಜಿಲ್ಲೆಯಲ್ಲಿ ಸ್ನಾತಕೋತ್ತರ ವಿಭಾಗ

464 - ಶ್ರೀ ಎಂ. ನಾರಾಯಣಸ್ವಾಮಿ (ಬೇತಮಂಗಲ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆಯಲ್ಲಿ ಸ್ನಾತಕೋತ್ತರ ವಿಭಾಗವನ್ನು ಸರ್ಕಾರ ಪ್ರಸ್ತುತ ವರ್ಷದಲ್ಲಿ ಪ್ರಾರಂಭಿಸುವುದೇ?

ಆ) ಹಾಗಿದ್ದರೆ ಅದನ್ನು ಯಾವಾಗ ಪ್ರಾರಂಭಿಸಲಾಗುವುದು.

ಇ) ಇಲ್ಲದಿದ್ದರೆ ಅದಕ್ಕೆ ಕಾರಣಗಳೇನು?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು):

ಅ) ಇಲ್ಲ

ಆ) ಬೆಂಗಳೂರು ವಿಶ್ವವಿದ್ಯಾಲಯವು ಕೋಲಾರ ಮತ್ತು ತುಮಕೂರಿನಲ್ಲಿ ಸ್ನಾತಕೋತ್ತರ ಕೇಂದ್ರವನ್ನು ಪ್ರಾರಂಭಿಸುವ ವಿಷಯವನ್ನು ಪರಿಶೀಲಿಸಲು ಒಂದು ಸಮಿತಿಯನ್ನು ರಚಿಸಿದೆ. ಸಮಿತಿ ವರದಿ ನೀಡಿ, ಬೆಂಗಳೂರು ವಿಶ್ವ ವಿದ್ಯಾಲಯ ಈ ಬಗ್ಗೆ ತೀರ್ಮಾನ ಕೈಗೊಂಡ ನಂತರ.

ಇ) ಉದ್ಭವಿಸುವುದಿಲ್ಲ.

ಬಂಗಾರಪೇಟೆ ತಾಲ್ಲೂಕಿನ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸರಬರಾಜು

465 - ಶ್ರೀ ಎಂ. ನಾರಾಯಣ ಸ್ವಾಮಿ (ಬೇತಮಂಗಲ) : ಮಾನ್ಯ ಇಂಧನ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆಯ ಬಂಗಾರುಪೇಟೆ ತಾಲ್ಲೂಕಿನಲ್ಲಿ 1991-92ನೇ ಸಾಲಿನಲ್ಲಿ ಎಷ್ಟು ಪಂಪುಸೆಟ್ಟುಗಳಿಗೆ ಸರ್ಕಾರ ವಿದ್ಯುತ್ ಸರಬರಾಜು ಮಾಡಿದೆ.

ಆ) ಎಷ್ಟು ಪಂಪುಸೆಟ್ಟುಗಳಿಗೆ ಸರಬರಾಜು ಮಾಡಬೇಕಾಗಿದೆ ಹಾಗೂ ಯಾವಾಗ ಮಾಡಲಾಗುವುದು?

ಶ್ರೀ ಎಂ. ರಾಮಪ್ಪ (ಇಂಧನ ರಾಜ್ಯ ಮಂತ್ರಿಗಳು):

ಅ) 1991-92ನೇ ಸಾಲಿನಲ್ಲಿ ಜನವರಿ 1992ರ ಅಂತ್ಯದವರೆಗೆ ಬಂಗಾರುಪೇಟೆ ತಾಲ್ಲೂಕಿನಲ್ಲಿ 394 ನೀರಾವರಿ ಪಂಪುಸೆಟ್ಟುಗಳನ್ನು ವಿದ್ಯುದ್ದೀಕರಿಸಲಾಗಿದೆ.

ಆ) ಈ ದಿನದವರೆಗೆ ಬಂಗಾರುಪೇಟೆ ತಾಲ್ಲೂಕಿನಲ್ಲಿ ಯಾವ ನೀರಾವರಿ ಪಂಪುಸೆಟ್ಟು ಅರ್ಜಿಯೂ ಬಾಕಿ ಉಳಿದಿಲ್ಲ.

Generation of Energy in the State.

470 - Sri Basavaraj Rayareddi (Yelburga) : Will the Minister of State for Energy be pleased State.

a) The total production of Electricity in State by all sources.

b) Out of this production how much units are lost in the system.

c) The steps taken to bring down the system loss.

d) The quantity of power lost due to theft and pilferage of meters